# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ 211 /23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 30.12.23

SDA 01/01/2024

**ಕಛೇರಿ ಆದೇಶ**

ವಿಷಯ: ಶ್ರೀ ಹೆಚ್. ಸಿ. ಕೃಷ್ಣಕುಮಾರ್, ಕಾರ್ಯಪಾಲಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1) ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ ರವರ ಪತ್ರ ಸಂಖ್ಯೆ:ಕಾಇಂ/ಲೋಇ/ಬೆಂವಿ/ಸಿ-2/ಕಾಇಂ/ನಿವೃತ್ತಿ/2023-24/3280, ದಿ: 14-12-2023
2) ಶ್ರೀ ಹೆಚ್. ಸಿ. ಕೃಷ್ಣಕುಮಾರ್, ಕಾರ್ಯಪಾಲಕ ಅಭಿಯಂತರರು ರವರ ಮನವಿ ದಿನಾಂಕ: 27-12-2023

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶ್ರೀ ಹೆಚ್. ಸಿ. ಕೃಷ್ಣಕುಮಾರ್, ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜನೆಗೊಂಡು, ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ-ಬೊಮ್ಮನಹಳ್ಳಿ) ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರನ್ನು ಉಲ್ಲೇಖ-(1)ರ ಪತ್ರದಲ್ಲಿ ದಿನಾಂಕ: 31-12-2023ರಂದು ವಯೋನಿವೃತ್ತಿ ಹೊಂದಲಿರುವುದರಿಂದ (ದಿನಾಂಕ: 31-12-2023ರಂದು ಸಾರ್ವತ್ರಿಕ ರಜಾ ದಿನವಾಗಿರುವುದರಿಂದ) ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಲು ಕೋರಿರುವುದನ್ನು ಹಾಗೂ ಉಲ್ಲೇಖ-(2)ರಂತೆ ಸದರಿ ಅಭಿಯಂತರರು ಸಲ್ಲಿಸಿರುವ ಮನವಿಯನ್ನು ಪರಿಗಣಿಸಿ, ಸದರಿ ಅಭಿಯಂತರರನ್ನು ದಿನಾಂಕ: 30-12-2023ರ ಅಪರಾಹ್ನದಿಂದ ಅನ್ವಯವಾಗುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್‌ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಉಪ ಮುಖ್ಯ ಮಾಹಿತಿ ಅಧಿಕಾರಿ
(ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 1158
ದಿನಾಂಕ: 1/1/24

30/12
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

30/12/2023 30/12/23 30/12

**ಪ್ರತಿಯನ್ನು:-**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ರಸ್ತೆಮೂಲಭೂತ ಸೌಕರ್ಯ) ರವರಿಗೆ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ-ಬೊಮ್ಮನಹಳ್ಳಿ) ವಿಭಾಗ ರವರಿಗೆ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್‌ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

1/1/24